5. ಅನುಬಂಧ - I

ಚಿಕ್ಕಬಳ್ಳಾಪುರ ಕ್ಷೇತ್ರದಲ್ಲಿ ಅಲ್ಪಸಂಖ್ಯಾತ ವಿದ್ಯಾರ್ಥಿನಿಲಯಗಳ ಸ್ಥಾಪನೆ

1062 (1498) ಶ್ರೀಮತಿ ಅನುಸೂಯಮ್ಮ ನಟರಾಜನ್ ಕೆ.ವಿ. (ಚಿಕ್ಕಬಳ್ಳಾಪುರ) ಮಾನ್ಯ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಚಿಕ್ಕಬಳ್ಳಾಪುರ ಕ್ಷೇತ್ರದಲ್ಲಿ ಅಲ್ಪ ಸಂಖ್ಯಾತ ಬಡ ಮಕ್ಕಳ ವ್ಯಾಸಂಗ ಮಾಡಲು ವಿದ್ಯಾರ್ಥಿ ನಿಲಯಗಳನ್ನು ಸ್ಥಾಪಿಸುವ ಬಗ್ಗೆ ಕೈಗೊಂಡಿರುವ ಕ್ರಮವೇನು ?

ಆ) ಪ್ರಸ್ತುತ ಸಾಲಿನಲ್ಲಿ ಎಷ್ಟು ಅಲ್ಪಸಂಖ್ಯಾತ ವಿದ್ಯಾರ್ಥಿನಿಲಯಗಳಿಗೆ ಮಂಜೂರಾತಿ ನೀಡಲಾಗುವುದು ?

ಶ್ರೀ ಎಂ.ಎಲ್. ಉಸ್ತಾದ್ (ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ರಾಜ್ಯ ಸಚಿವರು):

ಅ) ಅಲ್ಪಸಂಖ್ಯಾತರ ಇಲಾಖೆಯ ಕಾರ್ಯ ನೀತಿಯನ್ವಯ ಆದ್ಯತೆ ಮೇರೆಗೆ ವಿಶ್ವವಿದ್ಯಾಲಯ ಕೇಂದ್ರಗಳಲ್ಲಿ ವಿದ್ಯಾರ್ಥಿ ನಿಲಯಗಳನ್ನು ಸ್ಥಾಪಿಸಿರುತ್ತದೆ. ತದನಂತರ ಜಿಲ್ಲೆಯಲ್ಲಿ ಅಲ್ಪಸಂಖ್ಯಾತರ ಜನಸಂಖ್ಯೆಯು ಒಟ್ಟಾರೆ ಜನಸಂಖ್ಯೆಯ ಶೇ. 15 ರಷ್ಟು ಇರುವ ಕಡೆಗಳಲ್ಲಿ ವಿದ್ಯಾರ್ಥಿನಿಲಯ ಸ್ಥಾಪಿಸುವ ಉದ್ದೇಶ ಹೊಂದಿದೆ.

ಆ) ಆರ್ಥಿಕ ವರ್ಷದ ಅಂತ್ಯ ಸಮೀಪಿಸುತ್ತಿರುವುದರಿಂದ ಈ ಹಂತದಲ್ಲಿ ವಿದ್ಯಾರ್ಥಿ ನಿಲಯಗಳನ್ನು ಆರಂಭಿಸುವ ಪ್ರಶ್ನೆ ಉದ್ಭವಿಸುವುದಿಲ್ಲ.

ಚಿಕ್ಕಬಳ್ಳಾಪುರ ತಾಲ್ಲೂಕಿನ ಬೊಮ್ಮನಹಳ್ಳಿ ಮತ್ತು ಮಂಚನಬೆಲೆ ಗ್ರಾಮಗಳಲ್ಲಿ ಪಶುವೈದ್ಯ ಆಸ್ಪತ್ರೆ ಸ್ಥಾಪನೆ

1063 (1499) ಶ್ರೀಮತಿ ಅನುಸೂಯಮ್ಮ ನಟರಾಜನ್ ಕೆ.ವಿ. (ಚಿಕ್ಕಬಳ್ಳಾಪುರ) ಮಾನ್ಯ ಪಶುಸಂಗೋಪನೆ ಮತ್ತು ಸಕ್ಕರೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಚಿಕ್ಕಬಳ್ಳಾಪುರ ತಾಲ್ಲೂಕಿನಲ್ಲಿ ಎಷ್ಟು ಪಶು ಆಸ್ಪತ್ರೆಗಳು ಕೆಲಸ ನಿರ್ವಹಿಸುತ್ತಿವೆ ?

ಆ) ಬೊಮ್ಮನಹಳ್ಳಿ ಮತ್ತು ಮಂಚನಬೆಲೆ ಗ್ರಾಮಗಳಲ್ಲಿ ಹೆಚ್ಚು ದನಕರುಗಳು ಇರುವುದರಿಂದ ಪಶುವೈದ್ಯ ಆಸ್ಪತ್ರೆಗಳ ಅವಶ್ಯಕತೆ ಇದ್ದು, ಇವುಗಳ ಮಂಜೂರಾತಿಗಾಗಿ ಸರ್ಕಾರ ಕ್ರಮ ಕೈಗೊಳ್ಳುವುದೆ ?

ಶ್ರೀ ಎಂ. ಮಹದೇವ್ (ಪಶುಸಂಗೋಪನೆ ಮತ್ತು ಸಕ್ಕರೆ ಸಚಿವರು) :

ಅ) ಎರಡು ಪಶು ಆಸ್ಪತ್ರೆಗಳು ಚಿಕ್ಕಬಳ್ಳಾಪುರದಲ್ಲಿ ಕೆಲಸ ನಿರ್ವಹಿಸುತ್ತಿದೆ. (ಚಿಕ್ಕಬಳ್ಳಾಪುರ ಮತ್ತು ಪೆರೆಸಂದ್ರ)

ಆ) ಹೊಸ ಪಶು ಆಸ್ಪತ್ರೆ ಮಂಜೂರು ಮಾಡುವ ಕಾರ್ಯಕ್ರಮ ಸರ್ಕಾರದ ಮುಂದೆ ಇಲ್ಲ.

ಸಮಾಜಿಕ ನ್ಯಾಯ ಯೋಜನೆಯಡಿ ಫಲಾನುಭವಿಗಳಿಗೆ ಇರಬೇಕಾದ ಅರ್ಹತೆ

1064 (1491) ಶ್ರೀ ಎಂ.ಪಿ. ಅಪ್ಪಚ್ಚುರಂಜನ್ (ಸೋಮವಾರಪೇಟೆ) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಷ್ಟ್ರೀಯ ಸಾಮಾಜಿಕ ನ್ಯಾಯ ಯೋಜನೆಯಡಿಯಲ್ಲಿ ಫಲಾನುಭವಿಗಳಿಗೆ ಇರಬೇಕಾದ ಅರ್ಹತೆಗಳೇನು ?

ಆ) 2002-03ನೇ ಸಾಲಿಗೆ ಸದರಿ ಯೋಜನೆಯಲ್ಲಿ ಎಷ್ಟು ಹಣ ಬಿಡುಗಡೆಯಾಗಿದೆ ; ಎಷ್ಟು ಜನ ಫಲಾನುಭವಿಗಳಿಗೆ ಎಷ್ಟು ಮೊತ್ತದ ಹಣ ವಿತರಿಸಲಾಗಿದೆ ; ವಿತರಿಸಲು ಎಷ್ಟು ಹಣ ಬಾಕಿ ಇದೆ ?

ಇ) ಕೊಡಗು ಜಿಲ್ಲೆಗೆ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು) ?

ಈ) ಕೊಡಗು ಜಿಲ್ಲೆಯಲ್ಲಿ ಎಷ್ಟು ಹಣ ವೆಚ್ಚವಾಗಿದೆ ; ಬಾಕಿ ಎಷ್ಟಿದೆ ?

ಶ್ರೀ ಎ. ಕೃಷ್ಣಪ್ಪ (ಸಮಾಜ ಕಲ್ಯಾಣ ಸಚಿವರು) :

ಆ) ಭಾರತ ಸರ್ಕಾರದ ಸಾಮಾಜಿಕ ನ್ಯಾಯ ಮತ್ತು ಅಧಿಕಾರಯುಕ್ತ ಸಚಿವಾಲಯದಿಂದ ವಿಶೇಷ ಕೇಂದ್ರೀಯ ನೆರವಿನಡಿ ಬಿಡುಗಡೆಯಾಗುವ ಹಣದಲ್ಲಿ ಪರಿಶಿಷ್ಟ ಜಾತಿ / ಪಂಗಡದವರಿಗೆ ವಿವಿಧ ಅಭಿವೃದ್ಧಿ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ. ವಿಶೇಷ ಘಟಕ ಯೋಜನೆ ಗಿರಿಜನ ಉಪಯೋಜನೆಯಡಿಯಲ್ಲಿ ಬಡತನ ರೇಖೆಗಿಂತ ಕೆಳಗಿರುವ ಪರಿಶಿಷ್ಟ ಜಾತಿ / ಪರಿಶಿಷ್ಟ ವರ್ಗದ ಫಲಾನುಭವಿಗಳನ್ನು ಮಾತ್ರ ಆಯ್ಕೆ ಮಾಡಲಾಗುವುದು.

ಆ) 1) 2002-03ನೇ ಸಾಲಿನಲ್ಲಿ ಕೇಂದ್ರ ಸರ್ಕಾರದಿಂದ ಇಲ್ಲಿಯರೆಗೆ ಈ ಕೆಳಕಂಡಂತೆ ಅನುದಾನ ಬಿಡುಗಡೆ ಮಾಡಿದೆ :

ಪರಿಶಿಷ್ಟ ಜಾತಿ - ರೂ. 23.86 ಕೋಟಿ

ಪರಿಶಿಷ್ಟ ವರ್ಗ - ರೂ. 7.7133 ಕೋಟಿ

2) ಪರಿಶಿಷ್ಟ ಜಾತಿ - ರೂ. 9.70 ಕೋಟಿ - 10217 ಫಲಾನುಭವಿಗಳಿಗೆ

ಪರಿಶಿಷ್ಟ ವರ್ಗ - ರೂ. 250.11 ಲಕ್ಷಗಳನ್ನು ದಿ: 20-1-2003 ರಂದು ಜಿಲ್ಲಾ ಪಂಚಾಯತ್‌ಗೆ ಬಿಡುಗಡೆ ಮಾಡಲಾಗಿದೆ. ಫಲಾನುಭವಿಗಳನ್ನು ಆಯ್ಕೆ ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ.

3) ಪರಿಶಿಷ್ಟ ಜಾತಿ - ರೂ. 14.13 ಕೋಟಿ - ವಿತರಿಸಲು ಬಾಕಿ ಇರುತ್ತದೆ

ಪರಿಶಿಷ್ಟ ವರ್ಗ - ರೂ. 221.22 ಲಕ್ಷ - ವಿತರಿಸಲು ಬಾಕಿ ಇರುತ್ತದೆ

ಇ) 2002-03ನೇ ಸಾಲಿನ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ಅಭಿವೃದ್ಧಿ ಕಾರ್ಯಕ್ರಮಗಳಿಗೆ ಜಿಲ್ಲಾ ಪಂಚಾಯತ್, ಕೊಡಗು ಇಲ್ಲಿಗೆ ಈ ಕೆಳಕಂಡಂತೆ ಅನುದಾನ ಬಿಡುಗಡೆ ಮಾಡಲಾಗಿದೆ

ಪರಿಶಿಷ್ಟ ಜಾತಿ	ಪರಿಶಿಷ್ಟ ವರ್ಗ
ರೂ. 12.90 ಲಕ್ಷ	ರೂ. 3.00 ಲಕ್ಷ

ಜನವರಿ ಅಂತ್ಯದಲ್ಲಿ ಬಿಡುಗಡೆಯಾದ ಕಾರಣ ಇನ್ನು ವೆಚ್ಚವಾಗಬೇಕಾಗಿದೆ.

ಕೊಡಗು ಜಿಲ್ಲೆಯಲ್ಲಿ ಗಣಿಗಾರಿಕೆಗೆ ಅನುಮತಿ

1065 (1492) ಶ್ರೀ ಅಪ್ಪಚ್ಚು ರಂಜನ್ ಎಂ.ಪಿ. (ಸೋಮವಾರಪೇಟೆ) ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಆ) ಕೊಡಗು ಜಿಲ್ಲೆಯಲ್ಲಿ ಗಣಿ ಕೈಗಾರಿಕೆಯಿಂದ ಸರ್ಕಾರದ ಬೊಕ್ಕಸಕ್ಕೆ ಎಷ್ಟು ಆದಾಯ ಬರುತ್ತಿದೆ ?